# ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ

**ಬಸವ ಭವನ, ಹೈಗ್ರೌಂಡ್ಸ್, ಬೆಂಗಳೂರು-560001**

**ವಿಷಯ : ಕೆಲಸ ಮಾಡುವ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳವನ್ನು ತಡೆಗಟ್ಟುವ ಸಲುವಾಗಿ "ಆಂತರಿಕ ದೂರು ನಿವಾರಣಾ ಸಮಿತಿ" ಯನ್ನು ರಚಿಸುವ ಬಗ್ಗೆ-ಸಮಿತಿಯ ಪುನರ್ ರಚನೆ ಕುರಿತು**

**ಓದಲಾಗಿದೆ:**

1. ಸರ್ಕಾರದ ಅನಧಿಕೃತ ಟಿಪ್ಪಣಿ ಸಂಖ್ಯೆ ಮಮಇ/45/ರಾಮಆ/2012 ದಿನಾಂಕ 29.11.2012.
2. ಸರ್ಕಾರದ ಪತ್ರ ಸಂಖ್ಯೆ ಆನಾಸ/299/ಇಭತ/2012 ದಿನಾಂಕ 19.12.2012.
3. ಕರ್ನಾಟಕ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಸಮ ಸಂಖ್ಯೆ ಆದೇಶ ದಿನಾಂಕ 10.03.2016.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1) ಹಾಗೂ (2)ರಲ್ಲಿ ಓದಲಾಗುವ ಸರ್ಕಾರದ ಪತ್ರಗಳನ್ನು ಅನುಸರಿಸಿಕೊಂಡು ಕೆಲಸ ಮಾಡುವ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳವನ್ನು ತಡೆಯುವ ನಿಟ್ಟಿನಲ್ಲಿ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾಗುವ ಆದೇಶದ ಅನುಸಾರ ಕರ್ನಾಟಕ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ ಹಾಗೂ ಜಿಲ್ಲಾ ಆಯೋಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಅಧಿಕಾರಿ-ನೌಕರರಿಗೆ ಸಂಬಂಧಿಸಿದಂತೆ ದೂರು ನಿವಾರಣಾ ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರಲ್ಲಿ ಬಹುತೇಕ ಸದಸ್ಯರು ವರ್ಗಾವಣೆ ಹೊಂದಿರುವ ಪ್ರಯುಕ್ತ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ-ನೌಕರರನ್ನು ಒಳಗೊಂಡಂತೆ ಸಮಿತಿಯನ್ನು ಪುನರ್ ರಚನೆ ಮಾಡುವ ಸಲುವಾಗಿ ಈ ಕೆಳಕಂಡ ಆದೇಶ ಮಾಡಲಾಗಿದೆ.

**ಆದೇಶ ಸಂಖ್ಯೆ: ಕರಾಆ/ಆಡಳಿತ/36/2012**

**ಬೆಂಗಳೂರು, ದಿನಾಂಕ 30ನೇ ಆಗಸ್ಟ್ 2023**

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಪರಿಶೀಲಿಸಿಕೊಂಡು, ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ ಹಾಗೂ ನಿವಾರಿಸುವಿಕೆ) ಕಾಯ್ದೆ 2013ರ ಕಲಂ 4(1) ಹಾಗೂ ಸದರಿ ಕಾಯ್ದೆಯಡಿ ರಚಿಸಲಾಗಿರುವ ನಿಯಮಗಳು 2013ನ್ನು ಅನುಸರಿಸಿಕೊಂಡು, ಕರ್ನಾಟಕ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ ಹಾಗೂ ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಅಧಿಕಾರಿ-ನೌಕರರ ಮೇಲಿನ ಲೈಂಗಿಕ ಕಿರುಕುಳವನ್ನು ತಡೆಯುವ ಸಲುವಾಗಿ ಈ ಕೆಳಕಂಡ ಸದಸ್ಯರನ್ನು ಒಳಗೊಂಡಂತೆ **"ಆಂತರಿಕ ದೂರು ನಿವಾರಣಾ ಸಮಿತಿ"** ಯನ್ನು ಪುನರ್ ರಚಿಸಲಾಗಿದೆ.

| ಕ್ರ. ಸಂ. | ಅಧಿಕಾರಿ-ನೌಕರರ ಹೆಸರು, ಹುದ್ದೆ ಹಾಗೂ ಕಾರ್ಯನಿರ್ವಹಿಸುತ್ತಿರುವ ಸ್ಥಳ | ಸಮಿತಿಯಲ್ಲಿನ ಹುದ್ದೆ |
|---|---|---|
| 01 | **ಶ್ರೀಮತಿ ಡಿ. ಸುಚರಿತಮಣಿ,**<br>ಸಹಾಯಕ ರಿಜಿಸ್ಟ್ರಾರ್ ಹಾಗೂ ಸಹಾಯಕ ಆಡಳಿತಾಧಿಕಾರಿ,<br>ಕರ್ನಾಟಕ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ.<br>ಮೊ: 9743221647 | ಅಧ್ಯಕ್ಷರು |
| 02 | **ಶ್ರೀಮತಿ ಸುಮ.ಸಿ.ಎಸ್.**<br>ಆಪ್ತ ಕಾರ್ಯದರ್ಶಿ ಹಾಗೂ ತೀರ್ಪು ಬರಹಗಾರರು,<br>ಕರ್ನಾಟಕ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ.<br>ಮೊ: 9900958541 | ಸದಸ್ಯರು |
| 03 | **ಕು: ಸುನಿತ.ಕೆ.ಸಿ.**<br>ಶೀಘ್ರಲಿಪಿಗಾರರು,<br>ಕರ್ನಾಟಕ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ.<br>ಮೊ: 9743747722 | ಸದಸ್ಯರು |
| 04 | **ಶ್ರೀಮತಿ ಜಿ.ನಾಗಶ್ರೀ,**<br>ಶೀಘ್ರಲಿಪಿಗಾರರು,<br>ಕರ್ನಾಟಕ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ.<br>ಮೊ: 9731170961 | ಸದಸ್ಯರು |
| 05 | **ಶ್ರೀಮತಿ ಅರ್ಪಣ ಎಸ್. ಮಹೇಂದ್ರಕರ್,**<br>ಪ್ರಥಮ ದರ್ಜೆ ಸಹಾಯಕರು,<br>ಕರ್ನಾಟಕ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ.<br>ಮೊ: 9481200998 | ಸದಸ್ಯರು |
| 06 | **ಶ್ರೀಮತಿ ರಶ್ಮಿ.ಜಿ.,**<br>ಪ್ರಥಮ ದರ್ಜೆ ಸಹಾಯಕರು,<br>ಕರ್ನಾಟಕ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ.<br>ಮೊ: 9902584223 | ಸದಸ್ಯರು |

ಮಹಿಳೆಯರ ಮೇಲಿನ ಲೈಂಗಿಕ ಕಿರಿಕುಳದ ಬಗ್ಗೆ ಸಲ್ಲಿತವಾಗುವ ದೂರುಗಳ ಕುರಿತು **"ಆಂತರಿಕ ದೂರು ನಿವಾರಣಾ ಸಮಿತಿ"** ಅಧ್ಯಕ್ಷರು ಹಾಗೂ ಸದಸ್ಯರು ಪರಿಶೀಲನೆ ಮಾಡಿ, ಮೇಲ್ಕಂಡ ಕಾಯ್ದೆ ಹಾಗೂ ನಿಯಮಗಳನ್ನು ಮತ್ತು ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಮಾರ್ಗಸೂಚಿಗಳನ್ನು ಅನುಸರಿಸಿಕೊಂಡು, ಅದರಡಿ ಪ್ರತ್ಯಾಯೋಜಿಸಿರುವ ಅಧಿಕಾರದಡಿಯಲ್ಲಿ ಸೂಕ್ತ ಕ್ರಮ ವಹಿಸುವುದು. ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳವನ್ನು ತಡೆಯುವ ನಿಟ್ಟಿನಲ್ಲಿ ಕಾಲಕಾಲಕ್ಕೆ ಮಹಿಳೆಯರಲ್ಲಿ ಜಾಗೃತಿ/ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವುದು. ಹಾಗೆಯೇ ಮಾಸಿಕ/ತ್ರೈಮಾಸಿಕ ಸಭೆಯನ್ನು ನಡೆಸಿ, ದೂರುಗಳನ್ನು ಸ್ವೀಕರಿಸಿರುವ ಹಾಗೂ ದೂರಿನ ಕುರಿತು ಕ್ರಮ/ತೀರ್ಮಾನ ಕೈಗೊಂಡಿರುವ ಬಗ್ಗೆ ಚರ್ಚಿಸಿ ಸಭಾ ನಡವಳಿಯನ್ನು ದಾಖಲಿಸಿ, ಕಾಲಕಾಲಕ್ಕೆ ವರದಿಯನ್ನು ಕರ್ನಾಟಕ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಸಲ್ಲಿಸುವುದು. ಒಂದು ವೇಳೆ ಯಾವುದೇ ದೂರನ್ನು ಸ್ವೀಕರಿಸಿ ಆ ದೂರಿನ ಕುರಿತು ಅಂತಿಮ ನಿರ್ಣಯ ಕೈಗೊಂಡಲ್ಲಿ, ಅದರ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕರ್ನಾಟಕ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಹಾಗೂ ಕರ್ನಾಟಕ ರಾಜ್ಯ ಮಹಿಳಾ ಆಯೋಗಕ್ಕೆ ಕಳುಹಿಸಿಕೊಡುವ ಬಗ್ಗೆ ಕ್ರಮವಹಿಸುವುದು.

**"ಆಂತರಿಕ ದೂರು ನಿವಾರಣಾ ಸಮಿತಿ"** ಮೂಲಕ ಸಲ್ಲಿಸಲಾಗುವ ದೂರುಗಳ ಕುರಿತು ವರದಿಯನ್ನು ಕಾಲಕಾಲಕ್ಕೆ ಸಂಬಂಧಪಟ್ಟವರಿಗೆ ಕಳುಹಿಸಿಕೊಡುವ ಸಲುವಾಗಿ ಶ್ರೀಮತಿ ಡಿ. ಸುಚರಿತಮಣಿ, ಸಹಾಯಕ ರಿಜಿಸ್ಟ್ರಾರ್ ಹಾಗೂ ಸಹಾಯಕ ಆಡಳಿತಾಧಿಕಾರಿ, ಇವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ.

**ಮಾನ್ಯ ಅಧ್ಯಕ್ಷರ ಆದೇಶಾನುಸಾರ,**

30/08/23

**(ವಿಜಯಕುಮಾರ್)**
ರಿಜಿಸ್ಟ್ರಾರ್ ಹಾಗೂ ಆಡಳಿತಾಧಿಕಾರಿಗಳು,
ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ,
ಬಸವ ಭವನ, ಬೆಂಗಳೂರು.

30/08/23

<u>ಪ್ರತಿಗಳು:</u>

1. ಸರ್ಕಾರದ ಕಾರ್ಯದರ್ಶಿಗಳು, ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳು ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖೆ, ವಿಕಾಸ ಸೌಧ, ಬೆಂಗಳೂರು-ಮಾಹಿತಿಗಾಗಿ ಸಲ್ಲಿಸಿದೆ.
2. ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಕರ್ನಾಟಕ ಗೃಹ ಮಂಡಳಿ ಕಟ್ಟಡ, ಕಾವೇರಿ ಭವನ, ಬೆಂಗಳೂರು-560009.
3. ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರಿಗೆ (ಕಾಯ್ದೆ ಹಾಗೂ ನಿಯಮಗಳ ಪ್ರತಿಯೊಂದಿಗೆ).
4. ಕರ್ನಾಟಕ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ ಹಾಗೂ ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗಗಳ ಅಧಿಕಾರಿ-ನೌಕರರಿಗೆ.
5. ಸಹಾಯಕ ರಿಜಿಸ್ಟ್ರಾರ್ ಹಾಗೂ ಸಹಾಯಕ ಆಡಳಿತಾಧಿಕಾರಿಗಳು, ಎಲ್ಲಾ ಜಿಲ್ಲಾ ಆಯೋಗಗಳು (ಈ ಆದೇಶದ ಕುರಿತು ಆಯಾ ಜಿಲ್ಲಾ ಆಯೋಗದ ಅಧಿಕಾರಿ-ನೌಕರರ ಗಮನಕ್ಕೆ ತರುವ ಬಗ್ಗೆ ಹಾಗೂ ಆದೇಶವನ್ನು ಸೂಚನಾ ಫಲಕದಲ್ಲಿ ಪ್ರಕಟಿಸುವ ಬಗ್ಗೆ ಕ್ರಮವಹಿಸುವ ಸಲುವಾಗಿ)
6. ಕರ್ನಾಟಕ ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಸೂಚನಾ ಫಲಕಕ್ಕೆ.
7. ಕಛೇರಿ ಪ್ರತಿ.